ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಹೇಮಲತಾ ನಾಯಕ್ ರವರು ನಿಯಮ 72ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ.

ವಿಷಯ

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ-1987ರ ಪ್ರಕಾರ ದಿನಾಂಕ:24.04.1998 ರಂದು ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರವು ಅಸ್ತಿತ್ವಕ್ಕೆ ಬಂದಿದೆ. ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿ 10 ಕಿ.ಮೀ ಪ್ರದೇಶವನ್ನು ಒಳಗೊಂಡಿದೆ. ಒಟ್ಟು 12 ಗ್ರಾಮಗಳು ನಗರಾಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಗೆ ಬಂದಿವೆ. ಕೊಪ್ಪಳ ನಗರ ವ್ಯಾಪ್ತಿಯಲ್ಲಿಯೇ 275ಕ್ಕೂ ಹೆಚ್ಚು ಲೇಔಟ್‌ಗಳಿರುವ ಅಂದಾಜಿದೆ. ಈಗ ಉದ್ಭವಿಸಿರುವ "ಫಾರಂ ನಂ-3" ಸಾರ್ವಜನಿಕರಿಗೆ ವಿತರಿಸುತಿಲ್ಲ ಎಂಬ ಬಗ್ಗೆ.

ಉತ್ತರ

ಕೊಪ್ಪಳ ನಗರಸಭೆ ವ್ಯಾಪ್ತಿಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಗೊಂಡ ಆಸ್ತಿಗಳಿಗೆ ಫಾರಂ-3 ನೀಡಲಾಗುತ್ತಿದ್ದು, ಸರ್ಕಾರದ ಸುತ್ತೋಲೆ ಸಂಖ್ಯೆ:ನಅಇ/07/ಟಿಟಿಪಿ/2017 ದಿನಾಂಕ:22.03.2017 ಹಾಗೂ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ:23350/ಡಿಎಂಎ/121ಜಿಪಿಎಸ್/2017-18, ದಿನಾಂಕ:05.01.2018ರನ್ವಯ ನಗರಾಭಿವೃದ್ಧಿ ಪ್ರಾಧಿಕಾರದಿಂದ ಅನುಮೋದನೆಗೊಳ್ಳದ ಆಸ್ತಿಗಳಿಗೆ ಫಾರಂ-3 ನೀಡುವುದನ್ನು ತಡೆಹಿಡಿಯಲಾಗಿದೆ(ಪ್ರತಿ ಲಗತ್ತಿಸಿದೆ).

ಸಂಖ್ಯೆ: ನಅಇ 41 ಜಿಇಎಲ್ 2023

ಎನ್. ನಾಗರಾಜು (ಎಂ.ಟಿ.ಬಿ)
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 7 ಟಿಟಿಪಿ 2017

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ: 22.03.2017

Directorate of Municipal Admin
No ----------
Compilation ----------
28 MAR 2017
HOD AD Admin ----------

ಸುತ್ತೋಲೆ

ವಿಷಯ:- ನಗರಾಭಿವೃದ್ಧಿ ಪ್ರಾಧಿಕಾರ/ ಯೋಜನಾ ಪ್ರಾಧಿಕಾರ/ ಪುರಸಭೆ ಯೋಜನಾ ಪ್ರಾಧಿಕಾರದಿಂದ ಅಥವಾ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ಅನುಮೋದನೆ ಪಡೆಯದೇ ಇರುವ ವಿನ್ಯಾಸಗಳಲ್ಲಿನ ನಿವೇಶನಗಳಿಗೆ ಖಾತೆ ನೀಡುವ ಬಗ್ಗೆ.

ಉಲ್ಲೇಖ:-
1) ಸರ್ಕಾರದ ಪತ್ರ ಸಂಖ್ಯೆ: ಹೆಚ್‌ಯುಡಿ 395 ಟಿಟಿಪಿ 91, ದಿನಾಂಕ: 07-08-1992.
2) ಪೌರಾಡಳಿತ ನಿರ್ದೇಶನಾಲಯದ ಸುತ್ತೋಲೆ ಸಂ: DMA/Eng/CR/200/86-87, ದಿನಾಂಕ:18-09-1992.
3) ಸರ್ಕಾರದ ಸುತ್ತೋಲೆ ಸಂಖ್ಯೆ:ನಅಇ 104(2) ಬೆಂರೂಪ್ರಾ 2005, ದಿನಾಂಕ: 09-05-2005.
4) ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 556 ಮೈಅಪ್ರಾ 2013(1), ದಿನಾಂಕ: 28-05-2014.

*****

ರಾಜ್ಯದಲ್ಲಿನ ನಗರ ಸ್ಥಳೀಯ ಸಂಸ್ಥೆಗಳು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯನ್ನು ವಿಸ್ತರಿಸದೇ ಇರುವ ಪ್ರದೇಶಗಳ ವ್ಯಾಪ್ತಿಯಲ್ಲಿ ವಿನ್ಯಾಸ ಅನುಮೋದನೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ಪಡೆಯಲು ಉಲ್ಲೇಖ (1), (2), (3)ರ ಪತ್ರ/ ಸುತ್ತೋಲೆಗಳಲ್ಲಿ ಸರ್ಕಾರದ ನಿರ್ದೇಶನಗಳಿರುತ್ತದೆ. ಆದಾಗ್ಯೂ ಇಂತಹ ಕ್ಷೇತ್ರಗಳಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅನುಮೋದನೆ ಪಡೆಯದೇ ಹಲವಾರು ಅನಧಿಕೃತ ಬಡಾವಣೆಗಳು ನಗರ ಪ್ರದೇಶಗಳಲ್ಲಿ ರಚಿತಗೊಂಡು ಇಂತಹ ವಿನ್ಯಾಸಗಳಿಗೆ ಅಗತ್ಯವಿರುವ ಅನುಮೋದನೆಗಳನ್ನು ಪಡೆಯುವ ಪೂರ್ವದಲ್ಲಿಯೇ ನಿವೇಶನಗಳಿಗೆ ಖಾತೆಗಳನ್ನು ನೀಡುವ ಕ್ರಮವು ಸಮಂಜಸವಾಗಿರುವುದಿಲ್ಲ.

ನಗರ ಪ್ರದೇಶಗಳಲ್ಲಿ ಭೂ ಪರಿವರ್ತಿಸಿದ/ ಭೂ ಪರಿವರ್ತಿಸದ ಜಮೀನುಗಳಿಗೆ ವಿನ್ಯಾಸ ಅನುಮೋದನೆ ಪಡೆಯದೇ ಅನಧಿಕೃತ ಬಡಾವಣೆ/ರೆವೆನ್ಯೂ ಬಡಾವಣೆಗಳನ್ನು ನಿರ್ಮಾಣ ಮಾಡಿ, ನಿವೇಶನಗಳನ್ನು ನೋಂದಣಿ ಮಾಡಿಕೊಂಡು ಕಟ್ಟಡಗಳನ್ನು ಅಕ್ರಮವಾಗಿ ನಿರ್ಮಿಸುವುದರಿಂದಾಗುವ ಪ್ರತಿಕೂಲ ಪರಿಣಾಮಗಳನ್ನು ಗಮನಿಸಲಾಗಿ, ನಗರ ಪ್ರದೇಶಗಳಲ್ಲಿ ಉದ್ಯಾನವನ/ ಬಯಲುಜಾಗಗಳ ಕೊರತೆ, ನಾಗರೀಕ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ವಿಫಲತೆ, ವ್ಯವಸ್ಥಿತವಾದ ರಸ್ತೆಯ ಪರಿಚಲನೆ, ಮೂಲಭೂತ ಸೌಕರ್ಯದ ಕೊರತೆ ಹಾಗೂ ಯೋಜಿತ ಬೆಳವಣಿಗೆಗಳಲ್ಲಿ ತೊಡಕುಗಳಿರುವುದು ಕಂಡುಬರುತ್ತದೆ. ಇಂತಹ ಬೆಳವಣಿಗೆಗಳಿಗೆ ಅವಕಾಶ ಕಲ್ಪಿಸದೇ, ಅಭಿವೃದ್ಧಿ ಬೆಳವಣಿಗೆಗಳಲ್ಲಿ ಪಾರದರ್ಶಕತೆ, ಸಾರ್ವಜನಿಕ ಹಿತದೃಷ್ಟಿ ಹಾಗೂ ನಾಗರೀಕ ಸ್ನೇಹಿ ಸುಧಾರಣೆಗಳನ್ನು ತರಲು ಸರ್ಕಾರದ ಹಂತದಲ್ಲಿ ಕಾಯ್ದೆಗಳಿಗೆ ತಿದ್ದುಪಡಿ, ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆಗಳನ್ನು ಅಳವಡಿಸಿಕೊಳ್ಳಲಾಗುತ್ತಿದೆ.

ಇದಕ್ಕೆ ಪೂರಕವಾಗುವಂತೆ ವಿನ್ಯಾಸಗಳಿಗೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯದೇ ನಿವೇಶನಗಳನ್ನು ರಚಿಸಿ ಪರಭಾರೆ ಮಾಡುವ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ತಡೆಯುವ ಅವಶ್ಯವಿರುತ್ತದೆ. ಹಾಗೂ ದಿನಾಂಕ:19-10-2013ರ ಮುಂಚಿತವಾಗಿ ಬಂದಿರುವ ಅನಧಿಕೃತ ಬೆಳವಣಿಗೆಗಳನ್ನು ಸಕ್ರಮಗೊಳಿಸುವ ಕುರಿತು ಉಲ್ಲೇಖ (4)ರ ಅಧಿಸೂಚನೆಯಲ್ಲಿ ನಿಯಮಗಳನ್ನು ರಚಿಸಲಾಗಿದ್ದು, ಜಾರಿಗೊಳಿಸಬೇಕಾಗಿರುತ್ತದೆ.

ಹಾಗಾಗಿ, ನಗರ ಸ್ಥಳೀಯ ಸಂಸ್ಥೆಗಳು ಇನ್ನು ಮುಂದೆ ಸಕ್ಷಮ ಪ್ರಾಧಿಕಾರಗಳಿಂದ ವಿನ್ಯಾಸ ಅನುಮೋದನೆ ಪಡೆಯದೇ ಇರುವ ನಿವೇಶನಗಳಿಗೆ ಖಾತೆಯನ್ನು ನೀಡಬಾರದೆಂದು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಇಂತಹ ಕ್ರಮ ಕೈಗೊಳ್ಳದೇ ಖಾತೆಗಳನ್ನು ವಿತರಿಸಿದಲ್ಲಿ ಸಂಬಂಧಿಸಿದ ಸ್ಥಳೀಯ ಸಂಸ್ಥೆಯ ಆಯುಕ್ತರು/ ಪೌರಾಯುಕ್ತರು/ ಮುಖ್ಯಾಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮ ಜರುಗಿಸಲಾಗುವುದು.

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿಗಳು
ನಗರಾಭಿವೃದ್ಧಿ ಇಲಾಖೆ

**ಇವರಿಗೆ,**

1) ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿಶ್ವೇಶ್ವರಯ್ಯ ಟವರ್, ಬೆಂಗಳೂರು.
2) ಎಲ್ಲಾ ಜಿಲ್ಲಾಧಿಕಾರಿಗಳು.
3) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
4) ಆಯುಕ್ತರು, ಎಲ್ಲಾ ಮಹಾನಗರ ಪಾಲಿಕೆಗಳು.
5) ಆಯುಕ್ತರು, ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
6) ಸದಸ್ಯ ಕಾರ್ಯದರ್ಶಿಗಳು, ಎಲ್ಲಾ ಯೋಜನಾ ಪ್ರಾಧಿಕಾರಗಳು.
7) ಎಲ್ಲಾ ಪೌರಾಯುಕ್ತರು/ಮುಖ್ಯಾಧಿಕಾರಿಗಳು, ನಗರಸಭೆ/ ಪುರಸಭೆ/ ಪಟ್ಟಣ ಪಂಚಾಯಿತಿ.
8) ಶಾಖಾ ರಕ್ಷಾ ಕಡತ.

ನಿರ್ದೇಶಕರ ಕಛೇರಿ
ಪೌರಾಡಳಿತ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080- 22867172 / 22866302
ಫ್ಯಾಕ್ಸ್: 080-22863576 / 22861665
Email: dmablr@gmail.com
Website: www.municipaladmn.gov.in
9ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

ಸಂಖ್ಯೆ: 23350 ಡಿಎಂಎ 121 ಜಿಪಿಎಸ್ 2017-18

ದಿನಾಂಕ:05.01.2018

**ಸುತ್ತೋಲೆ**

**ವಿಷಯ:** ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನಿಯಮಬಾಹಿರವಾಗಿ ತೆರೆದಿರುವ ಖಾತೆಗಳನ್ನು ರದ್ದುಪಡಿಸುವ ಕುರಿತು.

**ಉಲ್ಲೇಖ :** ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇಲ್ಲಿ ಪ್ರಕರಣ ಸಂ: ಕಂಪ್ಲೆಂಟ್/ಉಪಲೋಕ್/ಬಿಡಿ-4551/ಡಿಆರ್ಇ-5

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ಉಪಲೋಕಾಯುಕ್ತರು ರವರೊಂದಿಗೆ ದಿನಾಂಕ.26.12.2017 ರಂದು ನಡೆದ ವಿಚಾರಣೆಯಲ್ಲಿ ರಾಮನಗರ ನಗರಸಭೆಯಲ್ಲಿ ಸುಮಾರು 1909 ನಿಯಮಬಾಹಿರ ಖಾತೆ ದಾಖಲೆಗಳ ಬಗ್ಗೆ ಪ್ರಸ್ತಾಪಿಸಿದ್ದು, ಈ ರೀತಿಯ ಪ್ರಕರಣಗಳು ರಾಜ್ಯದ ಇತರೆ ನಗರ ಸ್ಥಳೀಯ ಸಂಸ್ಥೆಗಳಲ್ಲೂ ಇರುವುದಾಗಿ ತಿಳಿಸುತ್ತಾ, ಸದರಿ ನಿಯಮಬಾಹಿರ ಖಾತೆಗಳನ್ನು ಗುರುತಿಸಿ ನಿಯಮಾನುಸಾರ ರದ್ದುಪಡಿಸಲು ನಿರ್ದೇಶಿಸಿರುತ್ತಾರೆ.

ಸರ್ಕಾರದ ಆದೇಶ ಸಂ: ನಅಇ 7 ಟಿಟಿಪಿ 2017 ದಿನಾಂಕ.22.03.2017 ರಲ್ಲಿ ಸಕ್ಷಮ ಪ್ರಾಧಿಕಾರಗಳಿಂದ ವಿನ್ಯಾಸ ಅನುಮೋದನೆ ಪಡೆಯದೇ ಇರುವ ನಿವೇಶನಗಳಿಗೆ ಖಾತೆಯನ್ನು ನೀಡಬಾರದೆಂದು ಈಗಾಗಲೇ ಕಟ್ಟುನಿಟ್ಟಿನ ಸೂಚನೆ ನೀಡಲಾಗಿರುತ್ತದೆ. ಅಲ್ಲದೆ ಇನ್ನಿತರೆ ಹಲವು ಪ್ರಕರಣಗಳಲ್ಲಿ ನಿಯಮಬಾಹಿರವಾಗಿ ಖಾತಾ ವರ್ಗಾವಣೆ ಮಾಡುತ್ತಿರುವ ಕುರಿತು ಹಲವಾರು ದೂರುಗಳು ಸ್ವೀಕೃತವಾಗುತ್ತಿವೆ.

ಆದ್ದರಿಂದ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ನಿಯಮಬಾಹಿರ ಖಾತಾ ವರ್ಗಾವಣೆಗಳನ್ನು ಗುರುತಿಸಿ ಕರ್ನಾಟಕ ಪುರಸಭೆಗಳ ಅಧಿನಿಯಮ 1964ರ ಕಲಂ 322, ಕರ್ನಾಟಕ ಮಹಾನಗರಪಾಲಿಕೆಗಳ ಅಧಿನಿಯಮ 1976ರ ಕಲಂ 114(ಎ), 102 ಮತ್ತು ಸರ್ಕಾರದ ಅಧಿಸೂಚನೆ ಸಂ:ನಅಇ 104 ಟಿಎಂಎಸ್ 2014 ದಿನಾಂಕ.09.01.2015 ಹಾಗೂ ಸರ್ಕಾರದ ಅಧಿಸೂಚನೆ ಸಂ:ಯುಡಿಡಿ 100 ಎಂಎನ್ಇ 2016 ದಿನಾಂಕ.17.04.2017ರನ್ವಯ ನಿಯಮಾನುಸಾರ ರದ್ದುಪಡಿಸಲು ಅಗತ್ಯ ಕ್ರಮಕೈಗೊಳ್ಳಲು ಆಯುಕ್ತರು/ ಪೌರಾಯುಕ್ತರು/ ಮುಖ್ಯಾಧಿಕಾರಿ ರವರಿಗೆ ಸೂಚಿಸಿದೆ.

ನಿರ್ದೇಶಕರು
ಪೌರಾಡಳಿತ ನಿರ್ದೇಶನಾಲಯ
ಬೆಂಗಳೂರು

ಪ್ರತಿಯನ್ನು

01. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು
02. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು
03. ಎಲ್ಲಾ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದಿ ಕೋಶ ರವರಿಗೆ ಅಗತ್ಯ ಕ್ರಮಕ್ಕಾಗಿ.
04. ಆಯುಕ್ತರು/ಪೌರಾಯುಕ್ತರು/ಮುಖ್ಯಾಧಿಕಾರಿಗಳು-ಮಹಾನಗರಪಾಲಿಕೆ/ನಗರಸಭೆ/ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ರವರಿಗೆ ಸೂಕ್ತ ಕ್ರಮಕ್ಕಾಗಿ
05. ಕಛೇರಿ ಪ್ರತಿ

Scanned by CamScanner